**ಸಂಖ್ಯೆ: ಆರ್ (1)1014/2024-25/ಪಿಎಸ್‌ಸಿ** **ದಿನಾಂಕ: 07-10-2024**

# ಪ್ರಕಟಣೆ

*****

ಆಯೋಗದ ಅಧಿಸೂಚನೆ ಸಂಖ್ಯೆ : ಪಿಎಸ್‌ಸಿ 1 ಆರ್‌ಟಿ ಬಿ 3 /2024 ಮತ್ತು ಪಿಎಸ್‌ಸಿ 1 ಆರ್‌ಟಿಬಿ 4 /2024 ದಿ:20-09-2024ರನ್ವಯ ಕೃಷಿ ಇಲಾಖೆಯಲ್ಲಿನ ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿ 672+273 (ಹೈ.ಕ.) ಹುದ್ದೆಗಳಿಗೆ ಅಧಿಸೂಚನೆ ಜಾರಿ ಮಾಡಲಾಗಿದ್ದು, ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ:07-10-2024 ಎಂದು ನಿಗದಿಪಡಿಸಲಾಗಿತ್ತು.

ಸರ್ಕಾರವು ದಿನಾಂಕ:18-09-2024ರಂದು ಅಧಿಸೂಚನೆಯಲ್ಲಿ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) (ತಿದ್ದುಪಡಿ) ನಿಯಮಗಳು 2024 ಅನ್ನು ರಚಿಸಿದ್ದು, ಅದರಲ್ಲಿ ಕರ್ನಾಟಕ ನಾಗರೀಕ ಸೇವೆಗಳ (ಸಾಮಾನ್ಯ ನೇಮಕಾತಿ) ನಿಯಮಗಳು 1977ರಲ್ಲಿನ ನಿಯಮ 9ಕ್ಕೆ ಮಾಡಿರುವ ತಿದ್ದುಪಡಿಯಲ್ಲಿ ಗ್ರೂಪ್-ಎ, ಬಿ, ಸಿ ಮತ್ತು ಡಿ ವೃಂದದಡಿ ಮಾಡುವ ನೇರ ನೇಮಕಾತಿ ಹುದ್ದೆಗಳಲ್ಲಿ ಕ್ರೀಡಾ ಸಾಧಕ ಅಭ್ಯರ್ಥಿಗಳಿಗೆ ಶೇಕಡ 2ರಷ್ಟು ಹುದ್ದೆಗಳನ್ನು ಮೀಸಲಿರಿಸಿ ಆದೇಶಿಸಿರುತ್ತದೆ.

ಮೇಲ್ಕಂಡ ಆದೇಶದ ಹಿನ್ನೆಲೆಯಲ್ಲಿ ಕೃಷಿ ಅಧಿಕಾರಿ ಮತ್ತು ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳಿಗೂ ಸಹ ಕ್ರೀಡಾ ಮೀಸಲಾತಿಯನ್ನು ಅಳವಡಿಸಿಕೊಳ್ಳಬೇಕಾಗಿರುವುದರಿಂದ ದಿನಾಂಕ:07-10-2024ರಿಂದ ಪ್ರಾರಂಭಿಸಬೇಕಿದ್ದ ಅರ್ಜಿ ಸ್ವೀಕಾರ ಪ್ರಕ್ರಿಯೆಯನ್ನು ಮುಂದೂಡಲಾಗಿದ್ದು, ಪರಿಷ್ಕೃತ ದಿನಾಂಕಗಳನ್ನು ನಂತರದ ದಿನಗಳಲ್ಲಿ ತಿಳಿಸಲಾಗುವುದು.

ಸಹಿ/-
ಕಾರ್ಯದರ್ಶಿ
ಕರ್ನಾಟಕ ಲೋಕ ಸೇವಾ ಆಯೋಗ.